**Akashvani : Bangalore**
**Regional Bulletin In Kannada**
**08.11.2024 / 14.30 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**08.11.2024 / 14.30 hrs**
**<><*<><>*><>**

<u>ಮುಖ್ಯಾಂಶಗಳು</u>

**೧. ವಕ್ಫ್ ಕಾಯ್ದೆ ತಿದ್ದುಪಡಿ ಸಮಿತಿ ವಿರೋಧಿಸುವವರಿಗೆ ಸಂವಿಧಾನದ ಗೌರವ ಇಲ್ಲ - ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ**

**೨. ಅಡಿಕೆ ಬೆಳೆಯ ಎಲೆ ಚುಕ್ಕಿ ರೋಗ ನಿಯಂತ್ರಣಕ್ಕೆ ಅಗತ್ಯ ಕ್ರಮ ಕೈಗೊಳ್ಳುವಂತೆ ಕೇಂದ್ರಕ್ಕೆ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಮನವಿ**

**೩. ಭಾರತವನ್ನು ವಿಕಸಿತ ರಾಷ್ಟ್ರವಾಗಿ ಅಭಿವೃದ್ಧಿ ಪಡಿಸಲು ಮಹಿಳೆಯರ ಕೊಡುಗೆ ಅಗತ್ಯ - ಕೇಂದ್ರ ಸಚಿವ ಪಿಯುಶ್ ಗೋಯಲ್**

**೪. ಪ್ರಧಾನಮಂತ್ರಿ ಸ್ವ-ನಿಧಿ ಯೋಜನೆ; ಯಾದಗಿರಿ ಜಿಲ್ಲೆಯಲ್ಲಿ ಯಶಸ್ವಿ ಅನುಷ್ಠಾನ**

**<><*<><>*><>**

ವಕ್ಫ್ ಕಾಯ್ದೆ ತಿದ್ದುಪಡಿಗೆ ಸಂವಿಧಾನ ಬದ್ಧವಾಗಿ ಸಂಸತ್ತಿನ ಜಂಟಿ ಸದನ ಸಮಿತಿ ರಚನೆಯಾಗಿದ್ದು, ಸಮಿತಿ ಬಗ್ಗೆ ಆರೋಪ ಮಾಡುವವರಿಗೆ ಸಂವಿಧಾನದ ಬಗ್ಗೆ ಗೌರವ ಇಲ್ಲ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ವಕ್ಫ್ ಸಂಸದೀಯ ಮಂಡಳಿ ಕರ್ನಾಟಕಕ್ಕೆ ಬೇಟಿ ನೀಡಿರುವುದು ಅದೊಂದು ಯಾವುದೇ ಆಧಾರರಹಿತವಾದ ಸಮಿತಿ ಎಂದು ಕಾಂಗ್ರೆಸ್ ನವರು ಮಾಡಿರುವ ಆರೋಪಕ್ಕೆ ಉತ್ತರ ಕೊಟ್ಟ ಅವರು, ಇದೊಂದು ಪಾರ್ಲಿಮೆಂಟ್ ಮಾಡಿದ ಸಮಿತಿ. ಉಭಯ ಸದನಗಳಿಂದ ರಚನೆಯಾದ ಸಮಿತಿ, ಪಾರ್ಲಿಮೆಂಟ್ ಜಂಟಿ ಸದನ ಮಾಡಿದ ಸಮಿತಿಗೆ ತನ್ನದೇ ಆದ ಗೌರವ ಇದೆ. ಕರ್ನಾಟಕದಲ್ಲಿ ಸಮಸ್ಯೆ ಇದೆ ಅಂತ ಅವರು ಇಲ್ಲಿಗೆ ಬಂದಿದ್ದರು. ಯಾವುದೇ ರೀತಿಯ ರಾಜಕೀಯ ಇಲ್ಲ. ಸಮಿತಿಯವರು ರೈತರ ಸಮಸ್ಯೆ ಆಲಿಸಿದ್ದಾರೆ ಎಂದು ತಿಳಿಸಿದರು. ಈ ಸರ್ಕಾರ ತನ್ನ ತಪ್ಪನ್ನು ಮುಚ್ಚಿಕೊಳ್ಳಲು, ಓಲೈಕೆ ರಾಜಕಾರಣ ಮಾಡಲು ಆರೋಪ ಮಾಡುತ್ತಿದ್ದಾರೆ. ಅವರಿಗೆ ಸಂವಿಧಾನದ ಬಗ್ಗೆ ಸಂಸತ್ತಿನ ಬಗ್ಗೆಯೂ ಗೌರವ ಇಲ್ಲ ಎಂದು ಕಿಡಿ ಕಾರಿದರು.

**<><*<><>*><>**

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಡಿಕೆ ಬೆಳೆಗಾರರು ಎಲೆ ಚುಕ್ಕಿ ರೋಗ ಬಾಧೆಯಿಂದ ತೀವ್ರವಾಗಿ ತತ್ತರಿಸಿ ಹೋಗಿದ್ದು, ಕೇಂದ್ರ ಸರ್ಕಾರ ಈ ಕೂಡಲೇ ರೋಗ ನಿಯಂತ್ರಣಕ್ಕೆ ಅಗತ್ಯ ಕ್ರಮ ಕೈಗೊಳ್ಳುವಂತೆ ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಅವರು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಮನವಿ ಮಾಡಿದ್ದಾರೆ. ದಕ್ಷಿಣ ಕನ್ನಡದಲ್ಲಿ ಜಿಲ್ಲೆಯಲ್ಲಿ ಅಡಿಕೆ ಬೆಳೆಗೆ ಎಲೆ ಚುಕ್ಕಿ ರೋಗ ವ್ಯಾಪಕವಾಗಿ ಕಾಡುತ್ತಿದ್ದು, ಅಡಿಕೆ ಬೆಳೆಯನ್ನೇ

ನಂಬಿರುವ ಲಕ್ಷಾಂತರ ಕೃಷಿಕರು ಆರ್ಥಿಕವಾಗಿ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಈ ರೋಗಬಾಧೆಯಿಂದ ಅಡಿಕೆ ಬೆಳೆಗಾರರನ್ನು ರಕ್ಷಿಸಬೇಕಾದರೆ ಕೇಂದ್ರ ಸರ್ಕಾರ ಕೂಡಲೇ ಎಲೆ ಚುಕ್ಕಿ ರೋಗವನ್ನು ಗಂಭೀರವಾಗಿ ಪರಿಗಣಿಸಬೇಕು. ಅಲ್ಲದೆ ಈ ರೋಗದ ಬಗ್ಗೆ ರೈತರಿಗೆ, ಕೃಷಿ ವಿಸ್ತರಣಾ ವಲಯದವರಿಗೆ ಸೂಕ್ತ ತರಬೇತಿ, ಮಾರ್ಗದರ್ಶನ ನೀಡಬೇಕು ಎಂದರು. ಆ ಮೂಲಕ ಎಲೆ ಚುಕ್ಕಿ ರೋಗವನ್ನು ಪರಿಣಾಮಕಾರಿಯಾಗಿ ತಡೆಯಲು ಕೀಟ ನಾಶಕ ಸಿಂಪಡಣೆ, ಜಾಗೃತಿ ಮತ್ತು ಇತರೆ ಕಾರ್ಯ-ಯೋಜನೆ ಕಾರ್ಯರೂಪಕ್ಕೆ ತರಬೇಕು. ಇದರಿಂದ ಕರಾವಳಿ ಭಾಗದ ಅಡಿಕೆ ಕೃಷಿಕರು ಹಾಗೂ ಅಡಿಕೆ ಉದ್ಯಮವನ್ನು ಎಲೆ ಚುಕ್ಕಿ ರೋಗಬಾಧೆಯಿಂದ ಪಾರು ಮಾಡಬಹುದು ಎಂದು ಸಂಸದರು ಸಲಹೆ ನೀಡಿದ್ದಾರೆ.

**<><*<><>*><>**

ಅಮೃತ್ ಕಾಲದ ಭಾರತದ ಪಯಣದಲ್ಲಿ ಮಹಿಳೆಯರ ಕೊಡುಗೆ ಅಪಾರವಾಗಿದ್ದು, ೨೦೪೭ರ ವರೆಗೆ ದೇಶವನ್ನು ವಿಕಸಿತ ಭಾರತ ರಾಷ್ಟ್ರವಾಗಿ ಅಭಿವೃದ್ಧಿ ಪಡಿಸಲು ಮಹಿಳೆಯರ ಕೊಡುಗೆ ಅಗತ್ಯವಾಗಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕೆ ಖಾತೆ ಸಚಿವ ಪಿಯುಶ್ ಗೋಯಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆ ಗೋಲ್ಡ್ ಮ್ಯಾನ್ ಸ್ಯಾಕ್ಸ್ ಸಂಸ್ಥೆ ಮಹಿಳಾ ಉದ್ಯಮಿಗಳಿಗೆ ಆಯೋಜಿಸಿದ್ದ ತರಬೇತಿ ಮತ್ತು ಆರ್ಥಿಕ ನೆರವು ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡುತ್ತಿದ್ದರು. ಕಟ್ಟು ಪಾಡುಗಳನ್ನು ಬೀರಲು ಸಬಲೀಕರಣದತ್ತ ಮಹಿಳೆಯರು ಸಾಗುವ ವಿಶ್ವಾಸವಿದೆ ಎಂದು ಸಚಿವರು ತಿಳಿಸಿದರು. ಖಾಸಗಿ ಹಣಕಾಸು ಸಂಸ್ಥೆ ಮಹಿಳೆಯರನ್ನು ಉದ್ಯಮಿಯಾಗಿ ತಯಾರುಮಾಡುವ ಉದ್ದೇಶ ಹೊಂದಿದ್ದು, ಈ ವರೆಗೂ ೩ ಸಾವಿರದ ೫೦೦ ಭಾರತೀಯ ಮಹಿಳೆಯರಿಗೆ ಅವರ ತರಬೇತಿಯ ಲಾಭ ತಲುಪಿದೆ. ಈ ಕಾರ್ಯದಲ್ಲಿ ಬೆಂಗಳೂರಿನ ಐಐಎಂ ಹೈದರಾಬಾದ್‌ನ ಭಾರತೀಯ ವಾಣಿಜ್ಯ ಶಾಲೆ ಕೈಜೋಡಿಸಿದೆ. ಈ ತರಬೇತಿ ಅನ್ವಯ ಹಣಕಾಸು ಆರ್ಥಿಕ ವ್ಯವಹಾರ ಮತ್ತು ಮಾರುಕಟ್ಟೆ ನಿರ್ವಹಣೆ ವಿಚಾರದಲ್ಲಿ ತರಬೇತಿ ನೀಡಲಾಗಿತ್ತಿದ್ದ ಹೂಡಿಕೆದಾರರ ಸಂಪರ್ಕವನ್ನು ಸಹ ತಲುಪಿಸಲು ಈ ಸಂಸ್ಥೆ ನೆರವು ನೀಡುತ್ತಿದೆ ಎಂದು ತಿಳಿಸಿದರು.

**<><*<><>*><>**

ರಾಜ್ಯದಲ್ಲಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ೭೦ ರಿಂದ ೮೦ ಸಾವಿರ ಕೋಟಿ ರೂಪಾಯಿ ಸಾಲಮಾಡಿ ಆರ್ಥಿಕವಾಗಿ ದಿವಾಳಿಯಾಗಿದೆ. ಆದರೆ ದೇಶದ ಆರ್ಥಿಕಸ್ಥಿತಿ ಸುಸ್ಥಿರವಾಗಿದ್ದು, ವಿಶ್ವದಲ್ಲೇ ಐದನೇ ಸ್ಥಾನದಲ್ಲಿದೆ ಎಂಬುದನ್ನು ಅರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಕೇಂದ್ರ ಸರಕಾರದ ಬಗ್ಗೆ ಟೀಕೆ ಮಾಡಬಾರದು ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ವಾಗ್ದಾಳಿ ನಡೆಸಿದ್ದಾರೆ. ಅವರಿಂದು ತೋರಣಗಲ್ಲಿನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯದ ಕಾಂಗ್ರೆಸ್ ಸರ್ಕಾರ ಸೆಮಿ ನಿಷೇಧದ ನಂತರ, ಅದರ ಉದ್ದೇಶವನ್ನೇ ಹೊಂದಿರುವ ಎಸ್‌ಡಿಪಿಐ ಮೊದಲಾದ ಇತರೇ ಸಂಘಟನೆಗಳ ಮೇಲಿನ ಪ್ರಕರಣಗಳನ್ನು ಹಿಂದಕ್ಕೆ ಪಡೆದಿದೆ ಎಂದರು. ಡಿ.ಜಿ.ಹಳ್ಳಿ ಗಲಾಟೆಯಲ್ಲಿನವರ ಮೇಲಿನ ಪ್ರಕರಣವನ್ನು ಸಹ ಹಿಂದಕ್ಕೆ ಪಡೆಯುವ ಹುನ್ನಾರ ನಡೆದಿದೆ. ಅದಕ್ಕಾಗಿ ಇವರಿಗೆ ಜನತೆ ಈ ಉಪ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಹೇಳಿದರು.

**<><*<><>*><>**

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಲ್ಲಿ ಒಂದಾಗಿರುವ ಪ್ರಧಾನ ಮಂತ್ರಿ ಸ್ವನಿಧಿ ಯೋಜನೆ ಯಾದಗಿರಿ ಜಿಲ್ಲೆಯಲ್ಲಿ ಯಶಸ್ವಿಯಾಗಿ ಅನು?ನಗೊಂಡಿದ್ದು, ಬೀದಿ ಬದಿಯ ವ್ಯಾಪಾರಿಗಳಿಗೆ ವರದಾನವಾಗಿದೆ ಎಂದು ಯಾದಗಿರಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಹಾಗೂ ಅಪರ ಜಿಲ್ಲಾಧಿಕಾರಿ ಶರಣಬಸಪ್ಪ ಕೊಟೆಪ್ಪಗೋಳ ಹೇಳಿದ್ದಾರೆ. ಈ ಕುರಿತು ಆಕಾಶವಾಣಿಗೆ ಮಾಹಿತಿ ನೀಡಿದ ಅವರು, ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಪ್ರಧಾನ ಮಂತ್ರಿ ಸ್ವನಿಧಿ ಯೋಜನೆ ಸಹಕಾರಿಯಾಗಿದೆ. ನೋಂದಾಯಿತ ಬೀದಿಬದಿ ವ್ಯಾಪಾರಿಗಳು ಕೇಂದ್ರ ಸರ್ಕಾರದ ನೆರವು ಪಡೆದುಕೊಂಡು ಹಣ್ಣು, ತರಕಾರಿ, ಸೊಪ್ಪು ಸೇರಿದಂತೆ ಇನ್ನಿತರೆ ವಸ್ತುಗಳನ್ನು ಮಾರಾಟ ಮಾಡುತ್ತಿದ್ದು, ಆರ್ಥಿಕವಾಗಿ ಸ್ವಾವಲಂಬಿಯಾಗುವತ್ತ ಹೆಜ್ಜೆ ಹಾಕುತ್ತಿದ್ದಾರೆ ಎಂದರು. ಯಾದಗಿರಿ ಜಿಲ್ಲೆಯಲ್ಲಿ ಈವರೆಗೆ ೪ ಸಾವಿರದ ೯೭೯ ಮಂದಿ ಪಿಎಂ ಸ್ವನಿಧಿ ಯೋಜನೆಯಡಿ ಕಿರು ಸಾಲ ಪಡೆದಿದ್ದು, ಬಹುತೇಕರು ಮೊದಲ ಹಾಗೂ ಎರಡನೇ ಮತ್ತು ಮೂರನೇ ಹಂತದಲ್ಲಿ ಪಡೆದ ಸಾಲವನ್ನು ಮರು ಪಾವತಿ ಮಾಡಿದ್ದಾರೆ. ಕೇಂದ್ರ ಸರ್ಕಾರದ ಸಾಲ ಸೌಲಭ್ಯವನ್ನು ಪಡೆದು ಹಾಲು, ಪತ್ರಿಕೆ ಸೇರಿದಂತೆ ವಿವಿಧ ಸ್ವ-ಉದ್ಯಮಗಳಲ್ಲಿ ತೊಡಗಿಕೊಂಡಿದ್ದಾರೆ ಎಂದು ಮಾಹಿತಿ ನೀಡಿದರು.

**ಧ್ವನಿ: ಶರಣಬಸಪ್ಪ ಕೊಟೆಪ್ಪಗೋಳ, ಅಪರ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ, ಯಾದಗಿರಿ.**

**ಧ್ವನಿ ೨: ಯಲ್ಲಾಲಿಂಗ, ಎಳೆನೀರು ವ್ಯಾಪಾರಿ, ಯಾದಗಿರಿ.**

**<><*<><>*><>**

ಮಕ್ಕಳನ್ನು ಮಾರಾಟ ಮಾಡುವುದು ಶಿಕ್ಷಾರ್ಹ ಅಪರಾಧವಾಗಿದ್ದು, ಮಕ್ಕಳನ್ನು ಮಾರುವ ಹಾಗೂ ಕೊಳ್ಳುವವರಿಗೆ ಕಠಿಣ ಶಿಕ್ಷೆ ವಿಧಿಸಲಾಗುವುದು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಡಾ. ಎನ್. ಶಿವಶಂಕರ ಅವರು ತಿಳಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿಯಲ್ಲಿ ಮಾತನಾಡಿದ ಅವರು, ಮಕ್ಕಳನ್ನು ಮಾರಾಟ ಮಾಡುವುದು ಶಿಕ್ಷಾರ್ಹ ಅಪರಾಧವಾಗಿದ್ದು, ಮಕ್ಕಳನ್ನು ಮಾರುವ ಹಾಗೂ ಕೊಳ್ಳುವವರಿಗೆ ಬಾಲನ್ಯಾಯ ಕಾಯ್ದೆ-೨೦೧೫ ರ ಸೆಕ್ಷನ್ ೮೦ ಮತ್ತು ೮೧ ರನ್ವಯ ೦೫ ವರ್ಷಗಳವರೆಗೂ ಸೆರೆಮನೆ ವಾಸದೊಂದಿಗೆ ೦೧ ಲಕ್ಷ ರೂಪಾಯಿಗಳ ದಂಡ ವಿಧಿಸಲಾಗುವುದು. ಇಂತಹ ಅಪರಾಧಗಳಲ್ಲಿ ಆಸ್ಪತ್ರೆಯವರು ಶಾಮೀಲಾದರೆ ಶಿಕ್ಷೆಯ ಅವಧಿ ೦೩ ವರ್ಷಗಳಿಗೆ ಕಡಿಮೆ ಇಲ್ಲದಂತೆ ೦೭ ವರ್ಷಗಳವರೆಗೆ ವಿಸ್ತರಣೆ' ಮಾಡಬಹುದಾಗಿದೆ. ಈ ದಿಸೆಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ವತಿಯಿಂದ ಮಕ್ಕಳ ಮಾರಾಟ ಅಪರಾಧದ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ. ಅನಾಥ ಪರಿತ್ಯಕ್ತ ಮತ್ತು ಒಪ್ಪಿಸಲ್ಪಟ್ಟ ಮಕ್ಕಳ ಮಾಹಿತಿಯು ಕಂಡುಬಂದಲ್ಲಿ ಸಾರ್ವಜನಿಕರು ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಬೆಂಗಳೂರು ಗ್ರಾಮಾಂತರ ಜಿಲ್ಲೆ ದೂರವಾಣಿ ಸಂಖ್ಯೆ: ೦೮೦-೨೯೫೬೦೦೩೪ ನ್ನು ಸಂಪರ್ಕಿಸಿ ಮಾಹಿತಿ ನೀಡಬಹುದಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಎನ್. ಶಿವಶಂಕರ ತಿಳಿಸಿದ್ದಾರೆ.

**<><*<><>*><>**

ಗದಗ ಜಿಲ್ಲೆಯಲ್ಲಿ ೨೦೨೪-೨೫ ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಎಫ್.ಎ.ಕ್ಯೂ ಗುಣಮಟ್ಟದ ಬಿಳಿ ಜೋಳ ಉತ್ಪನ್ನವನ್ನು ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ ಎಂದು ಗದಗ ಜಿಲ್ಲಾಧಿಕಾರಿ ಗೋವಿಂದ ರೆಡ್ಡಿ ತಿಳಿಸಿದ್ದಾರೆ. ಸರ್ಕಾರದ ಆದೇಶದನ್ವಯ ಮುಂಗಾರು ಋತುವಿನ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತರಿಂದ ಎಫ್.ಎ.ಕ್ಯೂ ಗುಣಮಟ್ಟದ ಬಿಳಿ ಜೋಳ ಉತ್ಪನ್ನವನ್ನು ಖರೀದಿಸಲು ಕರ್ನಾಟಕ

ರಾಜ್ಯ ಸಹಕಾರ ಮಾರಾಟ ಮಹಾಮಂಡಳ (ಮಾರ್ಕಫೆಡ್) ಸಂಸ್ಥೆಯನ್ನು ರಾಜ್ಯದ ವತಿಯಿಂದ ಖರೀದಿ ಸಂಸ್ಥೆಯನ್ನಾಗಿ ನೇಮಿಸಿ ಆದೇಶಿಸಿದೆ. ಸರ್ಕಾರದ ಆದೇಶದನ್ವಯ ಬಿಳಿಜೋಳ- ಹೈಬ್ರೀಡ್ - ಪ್ರತಿ ಕ್ವಿಂಟಾಲ್ ಗೆ ೩ ಸಾವಿರದ ೩೭೧ ರೂಪಾಯಿ ಹಾಗೂ ಬಿಳಿ ಜೋಳ -ಮಾಲ್ದಂಡಿ - ಪ್ರತಿ ಕ್ವಿಂಟಾಲ್ ಗೆ ೩ ಸಾವಿರದ ೪೨೧ ರೂಪಾಯಿ ಬೆಂಬಲ ಬೆಲೆ ನಿಗದಿಪಡಿಸಲಾಗಿದೆ ಎಂದು ಗೋವಿಂದ ರೆಡ್ಡಿ ತಿಳಿಸಿದ್ದಾರೆ. ಕೇಂದ್ರ ಸರ್ಕಾರದ ಹಾಗೂ ರಾಜ್ಯ ಸರ್ಕಾರದ ಬೆಂಬಲ ಬೆಲೆ ಖರೀದಿ ಮಾರ್ಗಸೂಚಿಗಳನ್ವಯ ಬಿಳಿ ಜೋಳ ಉತ್ಪನ್ನ ಖರೀದಿ ೨೦೨೪ ರ ಡಿಸೆಂಬರ ೧ ರಿಂದ ನೋಂದಣಿ ಕಾರ್ಯ ಪ್ರಾರಂಭವಾಗಲಿದೆ ಹಾಗೂ ಜಿಲ್ಲೆಯ ಗದಗ ಸೇರಿದಂತೆ ೪ ಕಡೆ ಖರೀದಿ ಕೇಂದ್ರಗಳನ್ನು ತೆರೆಯಲು ಸರ್ಕಾರ ಆದೇಶ ನೀಡಿದೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**<><*<><>*><>**

ರಾಜ್ಯದಲ್ಲಿ ವಿಧಾನಸಭಾ ಉಪಚುನಾವಣಾ ಬಿರುಸುಗೊಂಡಿದ್ದು, ಇಂದು ಹಾವೇರಿ ಜಿಲ್ಲೆ ಶಿಗ್ಗಾಂವಿ ವಿಧಾನಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಭರತ ಬೊಮ್ಮಾಯಿ ಪರವಾಗಿ ಸಂಸದರಾದ ಜಗದೀಶ್ ಶೆಟ್ಟರ್, ತೇಜಸ್ವಿ ಸೂರ್ಯ, ಬಸವರಾಜ ಬೊಮ್ಮಾಯಿ, ಶಾಸಕ ಬಸವನಗೌಡ ಪಾಟೀಲ ಯತ್ನಾಳ, ಶಂಕರ್ ಪಾಟೀಲ ಮುನೇನಕೊಪ್ಪ ಪ್ರಚಾರ ನಡೆಸಲಿದ್ದಾರೆ. ಇನ್ನೊಂದೆಡ ಕಾಂಗ್ರೆಸ್ ಅಭ್ಯರ್ಥಿ ಯಾಸೀರ್ ಅಹ್ಮದಖಾನ್ ಪಠಾಣ್ ಪರವಾಗಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಸಚಿವ ಶಿವಾನಂದ ಪಾಟೀಲ, ರಾಜ್ಯ ಸಭಾ ಸದಸ್ಯ ಜಿ.ಸಿ. ಚಂದ್ರಶೇಖರ್ ಸೇರಿದಂತೆ ಕಾಂಗ್ರೆಸ್ ಮುಖಂಡರು ಪ್ರಚಾರ ನಡೆಸಲಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**